**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇವರ ನ್ಯಾಯಾಲಯ, ಮೂಡಿಗೆರೆ.**

**ಸಿ.ಸಿ. ಸಂಖ್ಯೆ. 195/2025**

| | | |
|---|---|---|
| ಸಾಕ್ಷಿದಾರರ ಹೆಸರು | ಕುಮಾರ | ಸಿ.ಡಬ್ಲ್ಯೂ: 4 ಪಿ.ಡಬ್ಲ್ಯೂ: 3 |
| ತಂದೆಯ ಹೆಸರು | ಪಾಪಣ್ಣ | |
| ವಯಸ್ಸು | 46 ವರ್ಷ | |
| ಉದ್ಯೋಗ | ಕ್ಷೌರಿಕ | |
| ವಾಸ ಸ್ಥಳ | ಅಂಗಡಿ ಗ್ರಾಮ, ಗೋಣಿಬೀಡು | |

ದಿನಾಂಕ: 03.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆ ಸ.ಸ.ಅ.ರವರಿಂದ:**

1. ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಗೊತ್ತಿಲ್ಲ. ಚಾಸಾ.5 ಗಿರೀಶ್ ನನಗೆ ಗೊತ್ತಿಲ್ಲ. ಈಗ ನಾನು ನೋಡುತ್ತಿರುವ ನಿ.ಪಿ.3 ಮಹಜರ್ ನಲ್ಲಿ ನನ್ನ ಸಹಿ ಇರುತ್ತದೆ ಎಂದು ಗುರುತಿಸಿದ್ದರಿಂದ ಸಹಿಯನ್ನು ನಿ.ಪಿ.3(ಸಿ) ಎಂದು ಗುರುತಿಸಲಾಯಿತು. ನಿ.ಪಿ.4 ಛಾಯಚಿತ್ರದಲ್ಲಿ ನಾನು ಹಾಜರಿರುತ್ತೇನೆ. ಈಗ ನಾನು ನೋಡುತ್ತಿರುವ ನಿ.ಪಿ.5 ನೋಟೀಸಿನಲ್ಲಿ ನನ್ನ ಸಹಿ ಇರುತ್ತದೆ ಎಂದು ಗುರುತಿಸಿದ್ದರಿಂದ ಸಹಿಯನ್ನು ನಿ.ಪಿ.5(ಸಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ಸಹಿಯನ್ನು ಜನ್ನಾಪುರದಲ್ಲಿ ಇರುವ ನನ್ನ ಕಟ್ಟಿಂಗ್ ಶಾಪ್ ನಲ್ಲಿ ಮಾಡಿದ್ದೇನೆ. ಸಹಿಯನ್ನು ಪೊಲೀಸರು ಪಡೆದರು. ಸಹಿಯನ್ನು ನಮ್ಮ ಊರಿನ ಕೇಸಿನ ವಿಚಾರವಾಗಿ ಪಡೆದರು, ಯಾವ ಕೇಸು ಎಂದು ತಿಳಿಸಲಿಲ್ಲ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ, ನಾನು ಸದರಿ ದಾಖಲೆಯನ್ನು ಓದಿ ನೋಡಲಿಲ್ಲ, ಪೊಲೀಸರು ಸಹ ಓದಿ ಹೇಳಲಿಲ್ಲ. ಬೇರೆ ವಿಚಾರ ನನಗೆ ತಿಳಿದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲುಗಳನ್ನು ನಾನು ನೋಡಲಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಸ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು ಸ.ಸ.ಅ. ರವರಿಂದ**

2. ದಿನಾಂಕ 04.06.2025 ರಂದು ನಾನು ಈಗ ಓದಿ ಹೇಳಿದಂತೆ ಹೇಳಿಕೆಯನ್ನು ಪೊಲೀಸರಿಗೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯ ವಿಚಾರಗಳನ್ನು ನಿರಾಕರಿಸಿದ್ದರಿಂದ ನಿರಾಕರೀತ ಹೇಳಿಕೆಯನ್ನು ನಿ.ಪಿ.9 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ತಿಳಿದಿದ್ದರು ಸಹ ಆರೋಪಿ ನನಗೆ ಪರಿಚಯ ಇರುವುದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಶ್ರೀ ಹೆಚ್.ಜಿ.ಎ ವಕೀಲರಿಂದ – ಆರೋಪಿತನ ಪರವಾಗಿ

3. ಶ್ರೀ ಹೆಚ್.ಜಿ.ಎ ವಕೀಲರು ಹಾಜರಿದ್ದು ತಮ್ಮದೇನು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ